CCE-III-RR/PR/NSR/NSPR(B)/222/9238

**B**

**ಆಗಸ್ಟ್ 2024 ರ ಪರೀಕ್ಷೆ-3**

**AUGUST 2024 EXAMINATION-3**

ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12 ]
Total No. of Printed Pages : 12 ]
ಒಟ್ಟು ಪ್ರಶ್ನೆಗಳ ಸಂಖ್ಯೆ : 38 ]
Total No. of Questions : 38 ]

**CCE RR/PR/ NSR/NSPR**
**Reduced Syllabus**

Question Paper Serial No.

**ಸಂಕೇತ ಸಂಖ್ಯೆ : 33-K**
**Code No. : 33-K**

# ವಿಷಯ : ದ್ವಿತೀಯ ಭಾಷೆ — ಕನ್ನಡ

# Subject : Second Language — KANNADA

**(ಶಾಲಾ ಪುನರಾವರ್ತಿತ ಅಭ್ಯರ್ಥಿ / ಖಾಸಗಿ ಪುನರಾವರ್ತಿತ ಅಭ್ಯರ್ಥಿ / ಎನ್.ಎಸ್.ಆರ್. / ಎನ್.ಎಸ್.ಪಿ.ಆರ್.)**

**(Regular Repeater / Private Repeater / NSR / NSPR)**

ದಿನಾಂಕ : 07. 08. 2024 ] [ Date : 07. 08. 2024
ಸಮಯ : ಬೆಳಗ್ಗೆ 10-15 ರಿಂದ ಮಧ್ಯಾಹ್ನ 1-15 ರವರೆಗೆ ] [ Time : 10-15 A.M. to 1-15 P.M.
ಗರಿಷ್ಠ ಅಂಕಗಳು : 80 ] [ Max. Marks : 80

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

**Cut here/ಇಲ್ಲಿ ಕತ್ತರಿಸಿ**

1. ಈ ಪ್ರಶ್ನೆಪತ್ರಿಕೆಯು ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ***ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ (ಬಾಣವನ್ನು ಅನುಸರಿಸಿ), ಎಡಬದಿ ಪಾರ್ಶ್ವವನ್ನು ಕತ್ತರಿಸಬೇಡಿ.*** ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.
6. ನಿಮಗೆ ವಿತರಿಸಲಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ( Version ) ಮತ್ತು ನಿಮ್ಮ ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ಒಂದೇ ಆಗಿರುವುದನ್ನು ಖಾತರಿಪಡಿಸಿಕೊಳ್ಳಿ.

ಇಲ್ಲಿಂದ ಕತ್ತರಿಸಿ

**07. 08. 2024**

**TEAR HERE TO OPEN THE QUESTION PAPER**
**ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ**

**Tear here**

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಂದಿಗೆ ಬರೆಯಿರಿ :** **4 × 1 = 4**

1. ಆದೇಶ ಸಂಧಿಗೆ ಉದಾಹರಣೆಯಾಗಿರುವ ಪದ

   (ಎ) ಬೇರೊಬ್ಬ

   (ಬಿ) ಮಳೆಗಾಲ

   (ಸಿ) ಗುರುವನ್ನು

   (ಡಿ) ಶಾಲೆಯಿಂದ

2. ಸಪ್ತಮಿ ವಿಭಕ್ತಿ ಪ್ರತ್ಯಯವಿದು

   (ಎ) ಅ

   (ಬಿ) ಗೆ

   (ಸಿ) ಇಂದ

   (ಡಿ) ಅಲ್ಲಿ

3. ಅಂಕಿತನಾಮಕ್ಕೆ ಉದಾಹರಣೆಯಾಗಿರುವ ಪದ

(ಎ) ಬೆಂಗಳೂರು

(ಬಿ) ವಿಜ್ಞಾನಿ

(ಸಿ) ಹುಡುಗಿ

(ಡಿ) ಸಮುದ್ರ

4. ಇವುಗಳಲ್ಲಿ ವರ್ತಮಾನಕಾಲವನ್ನು ಸೂಚಿಸುವ ಪದ

(ಎ) ನೋಡುವನು

(ಬಿ) ನೋಡಿದನು

(ಸಿ) ನೋಡುತ್ತಾನೆ

(ಡಿ) ನೋಡಿತು

**II. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : 12 × 1 = 12**

5. ವಿಷದ ಬಾಣವು ಮರಕ್ಕೆ ಏಕೆ ತಗುಲಿತು ?

6. ಪುಟ್ಟರಾಜರ ತಂದೆ ತಾಯಿಗಳ ಹೆಸರೇನು ?

7. ಪುಟ್ಟರಾಜರು ಯಾವ ಯಾವ ಭಾಷೆಗಳಲ್ಲಿ ಪಾಂಡಿತ್ಯ ಗಳಿಸಿದ್ದರು ?

8. ಸಸ್ತನಿಗಳ ಆಶ್ರಯದಾಣಗಳು ಯಾವುವು ?

9. ಹಕ್ಕಿಗೂಡಿನಲ್ಲಿ ಯಾವುದರ ಸಮನ್ವಯತೆ ಇದೆ ?

10. ಗೋಪಾಲನಿಗೆ ಬಣ್ಣ ಬಣ್ಣದ ಹೂಗಳು ಹೇಗೆ ಕಾಣಿಸುತ್ತಿದ್ದವು ?

11. ಸಿದ್ಧಾರ್ಥ ಬುದ್ಧನಾದ ಪರಿಯನ್ನು ಕವಿ ಬಸವರಾಜ ಸಬರದ ಅವರು ಎಂತಹ ಕಥೆಯೆಂದು ಬಣ್ಣಿಸಿದ್ದಾರೆ ?

12. ತಿಮಿರಕ್ಕೆ ವೈರಿ ಯಾವುದು ?

13. ಅಡಿಗರು ಹಗಲಿರುಳು ಯಾವುದಕ್ಕೆ ಹೋರಾಡಬೇಕೆಂದು ಹೇಳುತ್ತಾರೆ ?

14. ಕುಣಿಗಲ್ ಕೆರೆ ಹೇಗೆ ಬಾಗಿದೆ ?

15. ಧನವಿದ್ದವರಲ್ಲಿ ಇರಬೇಕಾದ ಗುಣ ಯಾವುದು ?

16. ಕೌರವನ ಸೇನೆಯು ಉತ್ತರನಿಗೆ ಹೇಗೆ ಕಾಣಿಸಿತು ?

**III. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 8 × 2 = 16**

17. ಗಿಳಿಯು ಇಂದ್ರನನ್ನು ಯಾವ ವರ ಕೇಳಿತು ?

18. ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಬರೆಯಿರಿ.

19. ಹಕ್ಕಿಗೂಡಿನಲ್ಲಿ ಬದುಕಿನ ಯಾವ ಯಾವ ಅನುಭವಗಳಿವೆ ?

20. ಮಲಗಿದ್ದ ಗೋಪಾಲನನ್ನು ತಾಯಿಯು ಯಾವ ಮಾತಿಗಳಿಂದ ಎಬ್ಬಿಸಿದಳು ?

21. ಬಸವಣ್ಣನವರು ಜನರ ಧಾರ್ಮಿಕ ನಂಬಿಕೆಗಳನ್ನು ಏಕೆ ಖಂಡಿಸಿದ್ದಾರೆ ?

22. 'ರೂಪಿದ್ದು ಫಲವೇನು ಗುಣವಿಲ್ಲದನ್ನಕ್ಕ' – ಈ ಮಾತಿನ ಅರ್ಥವೈಶಿಷ್ಟ್ಯವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

23. ವೈದ್ಯರು ತನ್ನ ವೃತ್ತಿಯ ಕುರಿತು ಹೆಂಡತಿಗೆ ಏನು ಹೇಳಿದರು ?

24. 'ಕಳ್ಳರ ಗುರು' ಪಾಠದಿಂದ ನಾವು ಕಲಿತುಕೊಳ್ಳಬೇಕಾದ ವಿಚಾರಗಳೇನು ?

**IV. ಕೆಳಗಿನ ಕವಿ / ಸಾಹಿತಿಯ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : 1 × 3 = 3**

25. ಡಾ. ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು

**V. ಕೆಳಗಿನ ಪದ್ಯದ ಸಾರಾಂಶವನ್ನು ವಾಕ್ಯರೂಪದಲ್ಲಿ ಬರೆಯಿರಿ : 1 × 3 = 3**

26. ನರನೊಳಗೆ ನಾರಾಯಣನ ರೂಪು ಕಂಡು,
ತಿರೆಯೊಳಗೆ ಸುರಪುರದ ಮೈಸಿರಿಯನುಂಡು
ಪರಹಿತಕೆ ಬಳಲುತಿರಲದುವೆ ಜೀವನವು;
ಪೆರತೇನನೆಸಗಿದರು ನಮಗೆ ಲಾಂಛನವು.

**VI. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ : 1 × 3 = 3**

27. "ಕುಣಿಗಲ್ ಕೆರೆ ನಿಂಬೆ ಹಣ್ಣಿನಂತೆ ತುಂಬಿದೆ"

**VII. ಕೆಳಗೆ ಕೊಟ್ಟಿರುವ ಗಾದೆಮಾತುಗಳಲ್ಲಿ ಯಾವುದಾದರೂ ಒಂದನ್ನು ಆರಿಸಿಕೊಂಡು, ವಿಸ್ತರಿಸಿ ಬರೆಯಿರಿ : 1 × 3 = 3**

28. "ತುಂಬಿದ ಕೊಡ ತುಳುಕುವುದಿಲ್ಲ."

**ಅಥವಾ**

"ಮಾತು ಬೆಳ್ಳಿ, ಮೌನ ಬಂಗಾರ."

**VIII. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ : 5 × 3 = 15**

29. "ಇಂಥ ಒಣಮರದಲ್ಲಿ ಏಕೆ ವಾಸ ಮಾಡುತ್ತಿದ್ದೀಯ ?"

30. "ಅವನು ಬಂದರೆ ಕರೆದುಕೊಂಡು ಹೋಗು ತಾಯಿ."

31. "ಆ ಗೋಪಾಲ ಕೊಡಬೇಕು, ನಾವು ಉಣಬೇಕು"

32. "ಶಾಂತಿಯಲಿ ಬದುಕಿ ನೀ ಕರ್ತವ್ಯವನು ಮುಗಿಸು."

33. "ಭಾವ ತಂದಾನೆ ಬಣ್ಣದ ಸೀರೆ."

**IX. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** **1 × 4 = 4**

34. ಏಕಾಂಗಿ ವೀರನಂತೆ ..............................................

..........................................................................

..........................................................................

............................................. ಕತ್ತಲಲ್ಲಿ ನಡೆದನು

**ಅಥವಾ**

ಕಾಡು ಕಾಡು ....................................................

..........................................................................

..........................................................................

.................................... ಮಹಾಬೆಳಕೊಂದು ಕಂಡಿತು

**X. ಕೆಳಗಿನ ಪ್ರಶ್ನೆಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** **1 × 4 = 4**

35. ಅರ್ಜುನ ಮತ್ತು ಉತ್ತರ ಇವರ ಸಂಭಾಷಣೆಯ ಸ್ವಾರಸ್ಯವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

**ಅಥವಾ**

ಅರ್ಜುನ ಮತ್ತು ಉತ್ತರನ ಗುಣಸ್ವಭಾವಗಳ ವ್ಯತ್ಯಾಸಗಳನ್ನು ನೀವು ಮೆಚ್ಚುವ ಅಂಶಗಳೊಂದಿಗೆ ವಿವರಿಸಿ.

**XI. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :**

**1 × 4 = 4 ( 2 + 2 )**

36. ಮನುಷ್ಯನಾಗಿ ಹುಟ್ಟಿದ ಮೇಲೆ ಕಾಯಿಲೆ ಕಸಾಲೆ ತಪ್ಪಿದ್ದಲ್ಲ. ಜ್ವರ, ಕೆಮ್ಮು, ಅಜೀರ್ಣ, ಭೇದಿ, ತಲೆನೋವು, ಕ್ಷಯ, ಅಸ್ತಮಾ, ಸಕ್ಕರೆ ಕಾಯಿಲೆ, ಅಧಿಕ ರಕ್ತ ಒತ್ತಡ, ಚರ್ಮರೋಗಗಳು, ಹೃದಯ ಬೇನೆ, ನ್ಯುಮೇನಿಯಾ, ಕ್ಯಾನ್ಸರ್ ಇತ್ಯಾದಿ ಕಾಯಿಲೆಗಳಿಗೆ ಮನುಷ್ಯ ತುತ್ತಾಗುತ್ತಾನೆ.

ಕಾಯಿಲೆ ಬಂದಾಗ ನಾವು ವೈದ್ಯರಲ್ಲಿಗೆ ಹೋಗುತ್ತೇವೆ. ಕಾಯಿಲೆಗಳ ಲಕ್ಷಣ ತಿಳಿದು ನಮಗೆ ಬಂದಿರುವ ಕಾಯಿಲೆ ಯಾವುದೆಂದು ನಿರ್ಧಾರ ಮಾಡಿ ಅದಕ್ಕೆ ಸೂಕ್ತ ಚಿಕಿತ್ಸೆಯನ್ನು ವೈದ್ಯರು ಮಾಡುತ್ತಾರೆ. ಆಗ ಕಾಯಿಲೆ ವಾಸಿಯಾಗುತ್ತದೆ. ಇಲ್ಲವೇ ಹತೋಟಿಗೆ ಬರುತ್ತದೆ. ಆದರೆ ಇದು ಎಷ್ಟೋ ಬಾರಿ ನಿಧಾನವಾಗುತ್ತದೆ.

ಆಗ ರೋಗಿಗಳು "ವೈದ್ಯರು ಮುತುವರ್ಜಿಯಿಂದ ನೋಡಲಿಲ್ಲ, ಸರಿಯಾದ ಚಿಕಿತ್ಸೆ ನೀಡಲಿಲ್ಲ" ಎಂದು ದೂರುತ್ತಾರೆ. ವೈದ್ಯರು "ನಾನೇನು ಮಾಡಲಿ ? ಅವರು ನನ್ನೊಂದಿಗೆ ಸಹಕರಿಸಲಿಲ್ಲ. ನಾನು ಹೇಳಿದ ಹಾಗೆ ನಡೆದುಕೊಳ್ಳಲಿಲ್ಲ" ಎಂದು ರೋಗಿಗಳನ್ನು

ದೂರುತ್ತಾರೆ. ಇದನ್ನು ತಪ್ಪಿಸಲು ಖಂಡಿತ ಸಾಧ್ಯವಿದೆ. ವೈದ್ಯರು ಹೇಳುವ ನಿಯಮ ಪಾಲಿಸಿದರೆ ಇರುವ ಕಾಯಿಲೆಗಳನ್ನು ಗುರುತಿಸಿ ಚಿಕಿತ್ಸೆ ರೂಪಿಸಲು ಸಾಧ್ಯವಾಗುತ್ತದೆ. ಇದರಿಂದ ಎಲ್ಲರಿಗೂ ಒಳ್ಳೆಯದಾಗುತ್ತದೆ.

***ಪ್ರಶ್ನೆಗಳು :***

ಅ) ರೋಗಿ ಮತ್ತು ವೈದ್ಯರ ಪರಸ್ಪರ ದೂರುಗಳಾವುವು ?

ಆ) ಮನುಷ್ಯ ತುತ್ತಾಗುವ ಕಾಯಿಲೆಗಳಾವುವು ?

**XII. ಕೆಳಗಿನ ಯಾವುದಾದರೂ ಒಂದು ವಿಷಯವನ್ನು ಕುರಿತು ಪ್ರಬಂಧ ಬರೆಯಿರಿ : 1 × 4 = 4**

37. ಗ್ರಂಥಾಲಯಗಳ ಮಹತ್ವ.

**ಅಥವಾ**

ಅರಣ್ಯ ಸಂರಕ್ಷಣೆಯ ಇಂದಿನ ಅಗತ್ಯತೆ.

**XIII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :**

**1 × 5 = 5**

38. ನಿಮ್ಮನ್ನು ಬೆಳಗಾವಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ 'ಗೀತಾ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಿಕೊಡುವಂತೆ ಕೋರಿ, ಮಹಾನಗರ ಪಾಲಿಕೆಯ ಆಯುಕ್ತರಿಗೊಂದು ಮನವಿ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ಕೋಲಾರದ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿ 'ರಮೇಶ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸಿದ 'ಗಣರಾಜ್ಯೋತ್ಸವ' ಕಾರ್ಯಕ್ರಮದ ವಿವರಗಳನ್ನು ತಿಳಿಸಿ, ಬಳ್ಳಾರಿ ವಿದ್ಯಾನಗರ ಬಡಾವಣೆಯ ನಿವಾಸಿಯಾದ 'ಕಮಲಾಕರ' ಎಂಬ ಗೆಳೆಯನಿಗೆ ಪತ್ರವನ್ನು ಬರೆಯಿರಿ.

DO NOT WRITE ANYTHING HERE